5002 (6007) ಶ್ರೀ ಬಸವಣ್ಣೆಪ್ಪ ಜೆ. (ಹೊಳೆಹೊನ್ನೂರು) :- ಮಾನ್ಯ ಉನ್ನತ ಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಕರ್ನಾಟಕ ವಿಶ್ವವಿದ್ಯಾನಿಲಯದಲ್ಲಿ ವಿಜ್ಞಾನಿಗಳು ಕೈಗೊಳ್ಳುವ ಸಂಶೋಧನೆಗಳಿಗೆ ಸೂಕ್ತವಾದ ನೋಂದಾವಣಿ ವ್ಯವಸ್ಥೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದಲ್ಲಿ, ಈ ಅವ್ಯವಸ್ಥೆಗೆ ಕಾರಣರಾರು ತಿಳಿಸುವುದು:

ಇ) ಕರ್ನಾಟಕ ವಿಶ್ವವಿದ್ಯಾನಿಲಯದ ಪಾಲಿಮರ್ ಸೈನ್ಸ್ ವಿಭಾಗದ ಸೆಂಟರ್ ಆಫ್ ಎಕ್ಸ್‌ಲೆನ್ಸ್‌ನಲ್ಲಿ ನಡೆದಿರುವ ಸಂಶೋಧನೆಗಳನ್ನು ಏತಕ್ಕೆ ಇದುವರೆವಿಗೂ ವಿಶ್ವವಿದ್ಯಾನಿಲಯವು ನೋಂದಾಯಿಸಿರುವುದಿಲ್ಲ (ವಿವರ ನೀಡುವುದು):

ಈ) ಇದೇ ವಿಭಾಗದಲ್ಲಿ ಸೇವೆ ಸಲ್ಲಿಸಿರುವ ಹಿರಿಯ ಶ್ರೇಣಿ ಅಧ್ಯಾಪಕರುಗಳು ಕೈಗೊಂಡಿರುವ ಐಯನ್ ಎಕ್ಸ್‌ಚೇಂಜ್ ಮೆಂಬ್ರೇನ್ ರಿಸರ್ಚ್ ಸಂಶೋಧನೆಯನ್ನು ಅದೇ ವಿಭಾಗದ ಇತರ ಉನ್ನತ ಅಧಿಕಾರಿಗಳು ದುರುಪಯೋಗಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಉ) ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ?

ಶ್ರೀ ಡಿ. ಮಂಜುನಾಥ್ ಉನ್ನತ ಶಿಕ್ಷಣ ಸಚಿವರು. :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಸದರಿ ವಿಷಯವು ಕರ್ನಾಟಕ ವಿಶ್ವವಿದ್ಯಾಲಯದ ಗಮನಕ್ಕೆ ಇತ್ತೀಚೆಗೆ ಬಂದಿರುವುದರಿಂದ ಈ ಕುರಿತಂತೆ ವಿಚಾರಣಾ ಸಮಿತಿಯ ವರದಿಯು ಬಂದ ನಂತರ ಕರ್ನಾಟಕ ವಿಶ್ವವಿದ್ಯಾಲಯವು ಸೂಕ್ತ ಕ್ರಮ ಜರುಗಿಸಲಿದೆ.

ಈ) ಇಲ್ಲ

ಉ) ಉದ್ಭವಿಸುವುದಿಲ್ಲ

5003 (5734) ಶ್ರೀ ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ (ಬಾಗಲಕೋಟೆ):- ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

01. ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಒಟ್ಟು ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು):

02. ಸರಕಾರಿ ಶಾಲಾ ಕಾಲೇಜುಗಳ ನೌಕರರಿಗೆ ನೀಡುವ ಎಲ್ಲಾ ಸವಲತ್ತು ಸೌಲಭ್ಯಗಳನ್ನು ಅನುದಾನಿತ ಶಾಲಾ ಕಾಲೇಜುಗಳ ಸಿಬ್ಬಂದಿ ವರ್ಗದವರಿಗೆ ಸಮರ್ಪಕವಾಗಿ ವಿಸ್ತರಿಸಲಾಗಿದೆಯೇ:

03. ಇಲ್ಲವಾದಲ್ಲಿ ಕಾರಣಗಳೇನು;

04.ಅನುದಾನಿತ ಶಾಲಾ ಕಾಲೇಜುಗಳಲ್ಲಿರುವ ಸಿಬ್ಬಂದಿ ವರ್ಗದವರಿಗೆ ಸರ್ಕಾರಿ ಶಾಲಾ ಕಾಲೇಜು ಸಿಬ್ಬಂದಿ ವರ್ಗದವರಿಗೆ ನೀಡುವ ಬಡ್ತಿ ಸೌಲಭ್ಯವನ್ನು ಪೂರ್ಣ ಪ್ರಮಾಣದಲ್ಲಿ ನೀಡಲಾಗುತ್ತಿದೆಯೇ:

05. ಹೆಚ್ಚುವರಿ ವಿದ್ಯಾರ್ಥಿಗಳ ಸಂಖ್ಯೆಯನ್ನು ಗಣನೆಯಲ್ಲಿಟ್ಟುಕೊಂಡು ಹೆಚ್ಚುವರಿ ವರ್ಗಗಳನ್ನು ತೆರೆಯಲು ಮತ್ತು ಅದಕ್ಕೆ ಪೂರಕವಾದ ಸಿಬ್ಬಂದಿ ವರ್ಗದವರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡಿ ಸಹಕರಿಸುವ ಕ್ರಮ ಕೈಗೊಳ್ಳುತ್ತಿದೆಯೇ:

06. ಇಲ್ಲವಾದಲ್ಲಿ ಕಾರಣಗಳೇನು

07. ಅನುದಾನಿತ ಶಾಲಾ– ಕಾಲೇಜುಗಳ ಸಿಬ್ಬಂದಿ ವರ್ಗದವರ ಕುರಿತು ಸರಕಾರ ಅನುಸರಿಸುತ್ತಿರುವ ತಾರತಮ್ಯ ನೀತಿಯನ್ನು ನಿಲ್ಲಿಸಿ ಸಿಬ್ಬಂದಿ ವರ್ಗದವರಿಗೆ ಸರಕಾರಿ ನಿಯಮಾವಳಿಗಳಂತೆ ಸೌಲಭ್ಯಗಳನ್ನು ವಿಸ್ತರಿಸುವುದರ ಜೊತೆಗೆ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚುತ್ತಿರುವುದನ್ನು ಗಮನಿಸಿ ಹೆಚ್ಚುವರಿ ವರ್ಗಗಳನ್ನು ಪ್ರಾರಂಭಿಸಲು ಅನುವು ಮಾಡಿಕೊಡುವಲ್ಲಿ ಸರ್ಕಾರದ ನಿಲುವುಗಳೇನು:

ಶ್ರೀ ಆರ್. ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು.) :

01. ಅನುದಾನಿತ ಪ್ರೌಢಶಾಲೆಗಳು – 2704 ಅನುದಾನಿತ ಪದವಿ ಪೂರ್ವ ಕಾಲೇಜು – 526 (ಜಿಲ್ಲಾವಾರು ಪಟ್ಟಿ ಲಗತ್ತಿಸಿದೆ)

02. ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಹಾಗೂ ಅದರಡಿಯಲ್ಲಿ ರಚಿಸಿರುವ ನಿಯಮಗಳು ಅನ್ವಯಿಸುತ್ತದೆ. ಕರ್ನಾಟಕ ಶಿಕ್ಷಣ ಕಾಯಿದೆ ಕಲಂ 87ರ proviso ಕೆಳಗಿನಂತೆದೆ :–

'Provided that the minimum qualifications for recruitment, age of recruitment, and retirement and benefits of retirement of employees in educational institutions receiving maintenance grants from State Government shall be the same as those applicable for the corresponding categories of employees, if any state institutions unless otherwise prescribed.'

03. ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣಗಳ ನೌಕಕರಿಗೆ ಸಂಬಂಧಿಸಿದಂತೆ ಸರ್ಕಾರದ ದಿನಾಂಕ: 02–02–2000ರ ಅಧಿಸೂಚನೆ ಸಂಖ್ಯೆ: ಇಡಿ 52 ವಿವಿಧ 99ರಲ್ಲಿ ಒಳಗೊಂಡ ನಿಯಮಗಳನ್ನು ರೂಪಿಸಲಾಗಿದೆ. ಸದರಿ ನಿಯಮಗಳ ನಿಯಮ 3(1) (ಬಿ) ರನ್ವಯ ಈ ಕೆಳಕಂಡಂತೆ ಆಸ್ಪದವನ್ನು ಕಲ್ಪಿಸಲಾಗಿದೆ:–

'(b) Subject to the financial capacity of the State Government the salary of employees in respect of posts admitted into aid in recognises private educational institutions receiving aid from the State Government shall generally be the same as those applicable for the corresponding category of employees in Government educational institutions as per orders issued by the State Government in respect of this category of employees from time to time.

Provided that no employee of an aided institution shall be entitled to the benefits enumerated in Annexure -II'.

ಈ ರೀತಿ, ಸರ್ಕಾರಿ ಶಾಲಾ ಕಾಲೇಜುಗಳ ನೌಕರರಿಗೆ ನೀಡುವ ಎಲ್ಲಾ ಸವಲತ್ತು ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರಿಗೆ ವಿಸ್ತರಿಸಲು ಆಸ್ಪದ ಇಲ್ಲ.

ಸದರಿ ನಿಯಮದ ಅನುಬಂಧ–2ರನ್ವಯ ಕೆಲವು ಸೌಲಭ್ಯಗಳಿಗೆ ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು ಅರ್ಹರಿರುವುದಿಲ್ಲ.

04. ಸರ್ಕಾರಿ ಶಾಲೆಗಳಲ್ಲಿ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಶೇಕಡಾ 50ರಷ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಉಳಿದ ಶೇಕಡಾ 50ರಷ್ಟು ಹುದ್ದೆಗಳನ್ನು ಸೇವಾ ನಿರತ ಅರ್ಹ ಶಿಕ್ಷಕರಿಗೆ ಬಡ್ತಿ ನೀಡುವ ಮೂಲಕ ಭರ್ತಿ ಮಾಡಲು ನಿಯಮಗಳಲ್ಲಿ ಅವಕಾಶವಿದೆ.

ಆದರೆ ಅನುದಾನಿತ ಖಾಸಗಿ ಸಂಸ್ಥೆಗಳಲ್ಲಿನ ಮುಖ್ಯ ಶಿಕ್ಷಕರ ಹುದ್ದೆಗಳನ್ನು ಸಂಪೂರ್ಣವಾಗಿ ಬಡ್ತಿ ಮೂಲಕ ತುಂಬಲು ಅವಕಾಶವಿರುತ್ತದೆ.

ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿಯ ನೌಕರರಿಗೆ ನಿಯಮಾನುಸಾರ ಬಡ್ತಿಯ ಅವಕಾಶಗಳನ್ನು ಕಲ್ಪಿಸಲಾಗಿದೆ.

05. (06) ಸರ್ಕಾರದ ದಿನಾಂಕ: 07–05–2ರಿಂದ ಮಿತವ್ಯಯ ಆದೇಶಗಳು ಜಾರಿಯಲ್ಲಿರುವುದರಿಂದ ಹೆಚ್ಚುವರಿ ವಿಭಾಗಗಳನ್ನು ಅನುದಾನ ಸಹಿತ ಮಂಜೂರು ಮಾಡುವುದನ್ನು ಸ್ಥಗಿತಗೊಳಿಸಲಾಗಿದೆ.

07. ಕ್ರಮ ಸಂಖ್ಯೆ: 02, 03, 05 ಮತ್ತು 06ಕ್ಕೆ ನೀಡಿರುವ ಉತ್ತರ ಇದಕ್ಕೆ ಅನ್ವಯಿಸುತ್ತದೆ.

5004 (5735)ಶ್ರೀ. ಚರಂತಿಮಠ್ ವೀರಣ್ಣ ಚಂದ್ರಶೇಖರಯ್ಯ(ಬಾಗಲಕೋಟೆ):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

1. ಬಾಗಲಕೋಟೆ ಕ್ಷೇತ್ರದಲ್ಲಿ ಬರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಮತ್ತು ಅವುಗಳಿಗೆ ಮಂಜೂರಾದ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು?

2. ಅವುಗಳನ್ನು ಯಾವಾಗ ತುಂಬಿ ಜನಾರೋಗ್ಯ ಸೇವೆಗೆ ಅನುಕೂಲ ಮಾಡಿಕೊಡಲಾಗುವುದು;

3. ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಕೇಂದ್ರಗಳನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ ಮತ್ತು ಯಾವಾಗ ಮೇಲ್ದರ್ಜೆಗೇರಿಸಲಾಗುವುದು;

4. ಜನಾರೋಗ್ಯ ಸೇವೆಯನ್ನು ಅಭಿವೃದ್ಧಿಪಡಿಸುವ ದಿಸೆಯಲ್ಲಿ ಪುನರ್ ವಸತಿ ಕೇಂದ್ರಗಳನ್ನು ಹೊಂದಿರುವ ಬಾಗಲಕೋಟೆ ಕ್ಷೇತ್ರಕ್ಕೆ ಸಂಬಂಧಪಟ್ಟಂತೆ ಸರ್ಕಾರದ ವಿಶೇಷ ಯೋಜನೆಗಳೇನು?

ಶ್ರೀ ಎನ್. ಚಲುವರಾಯಸ್ವಾಮಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.:

1. ಬಾಗಲಕೋಟೆ ಕ್ಷೇತ್ರದಲ್ಲಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ 3. (ಕಲಾದಗಿ, ರಾಮಪುರ, ಸುತಗುಂಡಾರ)

ಮಂಜೂರಾದ ಹುದ್ದೆಗಳು – 64

ಖಾಲಿ ಇರುವ ಹುದ್ದೆಗಳು – 6

2. ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಳ್ಳಲು ಸೂಚಿಸಿದ್ದು, ಅದರಂತೆ ನೇಮಿಸಿಕೊಳ್ಳಲಾಗುತ್ತಿದೆ. ರಾಜ್ಯಮಟ್ಟದಲ್ಲಿಯೂ ಸಹ ಸಂದರ್ಶನ ಕರೆದು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ. ಇತರೆ ಸಿಬ್ಬಂದಿಗಳನ್ನು ಪದೋನ್ನತಿ ಹಾಗೂ ವಿಶೇಷ ನೇರ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.